ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-ಲಸಿಕೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE: 3/3/2021

## ಅಡ್ಡ ಪರಿಣಾಮ ಇಲ್ಲ ತಾಂತ್ರಿಕ ಸಮಸ್ಯೆ ತಪ್ಪಿಲ್ಲ

# 6,313 ಮಂದಿಗೆ ಲಸಿಕೆ

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯದಲ್ಲಿ ಕೋವಿಡ್ ಲಸಿಕೆ ಅಭಿಯಾನ 2.0 ಎರಡನೇ ದಿನವಾದ ಮಂಗಳವಾರ 5,166 ಹಿರಿಯ ನಾಗರಿಕರು ಹಾಗೂ 1,147 ಮಂದಿ ನಾನಾ ಆರೋಗ್ಯ ಸಮಸ್ಯೆ ಹೊಂದಿರುವವರು ಸೇರಿ ಒಟ್ಟು 6,313 ಮಂದಿ ಲಸಿಕೆ ಪಡೆದುಕೊಂಡಿದ್ದಾರೆ.

ಅಭಿಯಾನದ ಮೊದಲ ದಿನ ತಾಂತ್ರಿಕ ಸಮಸ್ಯೆಯಿಂದಾಗಿ ಹೆಚ್ಚಿನ ಪ್ರಮಾಣದಲ್ಲಿ ಲಸಿಕೆ ವಿತರಣೆ ಸಾಧ್ಯವಾಗಿರಲಿಲ್ಲ. ಮಂಗಳವಾರವೂ ತಾಂತ್ರಿಕ ಸಮಸ್ಯೆ ಉಂಟಾಯಿತಾದರೂ, ಬೆಳಗ್ಗೆ 9ರಿಂದಲೇ ಲಸಿಕೆ ವಿತರಣೆ ಕಾರ್ಯ ಪ್ರಾರಂಭಿಸಿದ್ದರಿಂದ ಬಹಳಷ್ಟು ಆಸ್ಪತ್ರೆಗಳಲ್ಲಿ ನಿಗದಿತ ಗುರಿಯಂತೆ 200 ಮಂದಿಗೆ ಲಸಿಕೆ ನೀಡಲಾಯಿತು. ಲಸಿಕೆ ಪಡೆದವರಲ್ಲಿ ಯಾರಿಗೂ ಯಾವುದೇ ರೀತಿಯ ಅಡ್ಡಪರಿಣಾಮಗಳು ವರದಿಯಾಗಿಲ್ಲ ಎಂದು ಆರೋಗ್ಯ ಇಲಾಖೆ ತಿಳಿಸಿದೆ. ಕೋವಿನ್ ಪೋರ್ಟಲ್ ತಾಂತ್ರಿಕ ಸಮಸ್ಯೆ ಮುಂದುವರಿದಿತ್ತು. ಲಸಿಕೆ ಪಡೆಯಲು ಬಂದಿದ್ದವರು 1-2 ತಾಸು ಕಾದು ಲಸಿಕೆ ಪಡೆಯಬೇಕಾಯಿತು. ಇದರಿಂದ ಹಿರಿಯ ನಾಗರಿಕರು ಹಾಗೂ ಆರೋಗ್ಯ ಸಮಸ್ಯೆ ಹೊಂದಿದ್ದವರು ವ್ಯವಸ್ಥೆ ವಿರುದ್ಧ ತೀವ್ರ ಬೇಸರ ವ್ಯಕ್ತಪಡಿಸಿದರು.



### ಲಸಿಕೆ ಪಡೆದ ರಾಜ್ಯಪಾಲರು

ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ರಾಜ್ಯಪಾಲ ವಜುಭಾಯಿ ವಾಲಾ ಅವರು ಮಂಗಳವಾರ ಲಸಿಕೆ ಹಾಕಿಸಿಕೊಂಡರು. ರಾಜಭವನ ಕಚೇರಿ ಸಿಬ್ಬಂದಿ ಮೊದಲೇ ಆನ್‌ಲೈನ್ ನೋಂದಣಿ ಮಾಡಿದ್ದರು. ಮಧ್ಯಾಹ್ನ 2.45ಕ್ಕೆ ಆಸ್ಪತ್ರೆಗೆ ಆಗಮಿಸಿ ಲಸಿಕೆ ಪಡೆದುಕೊಂಡರು. ನಂತರ 30 ನಿಮಿಷ ನಿಗಾ ಕೊಠಡಿಯಲ್ಲಿ ವಿಶ್ರಮಿಸಿದರು. ಯಾವುದೇ ಅಡ್ಡ ಪರಿಣಾಮಗಳು ಕಾಣಿಸಿಕೊಳ್ಳದ ಕಾರಣ ಆಸ್ಪತ್ರೆಯಿಂದ ತೆರಳಿದರು ಎಂದು ಕೆ.ಸಿ. ಜನರಲ್ ಆಸ್ಪತ್ರೆ ಅಧಿಕಾರಿಗಳು ತಿಳಿಸಿದರು.



ಹಿರೇಕೆರೂರ ನಿವಾಸದಲ್ಲಿ ಕೃಷಿ ಸಚಿವ ಬಿ.ಸಿ. ಪಾಟೀಲ್ ಲಸಿಕೆ ಪಡೆದರು.

### ಮರಣ ಪ್ರಮಾಣ ಏರಿಕೆ

ಬೆಂಗಳೂರು: ರಾಜ್ಯದಲ್ಲಿ ಕಳೆದೆರಡು ವಾರಗಳಿಂದ ಕರೋನಾ ಸೋಂಕು ಪ್ರಕರಣ ಹಾಗೂ ಮರಣ ಪ್ರಮಾಣದಲ್ಲಿ ಕೊಂಚ ಏರಿಕೆ ಕಂಡುಬಂದಿದ್ದು, ಮಂಗಳವಾರ ಬೆಂಗಳೂರಿನಲ್ಲಿ 4, ಮೈಸೂರಿನಲ್ಲಿ 2, ತುಮಕೂರಿನಲ್ಲಿ 1 ಸೇರಿ 7 ಸೋಂಕಿತರು ಮೃತಪಟ್ಟಿದ್ದಾರೆ. ಮೃತರ ಸಂಖ್ಯೆ 12,343 ತಲುಪಿದೆ. ಹೊಸದಾಗಿ 437 ಸೋಂಕು ಪ್ರಕರಣಗಳು ವರದಿಯಾಗಿದ್ದು, ಸೋಂಕಿತರ ಸಂಖ್ಯೆ 9.52 ಲಕ್ಷ ದಾಟಿದೆ. 309 ಮಂದಿ ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ್ದು, ಗುಣಮುಖರ ಸಂಖ್ಯೆ 9.33 ಲಕ್ಷ ಮೀರಿದೆ.